# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 948 |
| ಸದಸ್ಯರ ಹೆಸರು | : | ಶ್ರೀ. ಐವನ್ ಡಿ'ಸೋಜಾ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14.03.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಜಿಲ್ಲಾ ಪಂಚಾಯತ್ ತಾಲ್ಲೂಕು ಪಂಚಾಯತ್ ಚುನಾವಣೆಗಳನ್ನು ಎಂದು ನಡೆಸಲು ತೀರ್ಮಾನಿಸಲಾಗಿದೆ; ಚುನಾವಣೆಗಳನ್ನು ನಡೆಸಲು ವಿಳಂಬವಾಗುತ್ತಿರಲು ಕಾರಣಗಳೇನು; (ವಿವರ ನೀಡುವುದು) | ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿಯು ಜೂನ್ 2021ಕ್ಕೆ ಮುಕ್ತಾಯಗೊಂಡಿರುತ್ತದೆ.<br><br>ಮೇಲಿನ ಅವಧಿಯು ಮುಗಿದ ನಂತರ ಚುನಾವಣೆಯನ್ನು ನಡೆಸುವ ಸಿದ್ಧತೆಯಲ್ಲಿದ್ದಾಗ ರಾಜ್ಯದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗ ಹಿನ್ನೆಲೆಯಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಲಿಲ್ಲ. ತದನಂತರ, ರಾಜ್ಯ ಸರ್ಕಾರ ಹೊಸದಾಗಿ ಜಿಲ್ಲಾ ಹಾಗೂ ತಾಲ್ಲೂಕುಗಳನ್ನು ರಚಿಸಲಾಗಿದ್ದು, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿ ಕ್ಷೇತ್ರಗಳ ಭೂ ವ್ಯಾಪ್ತಿಯಲ್ಲಿ ಬದಲಾವಣೆಯಾದ ಕಾರಣ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿಗಳ ಚುನಾವಣಾ ಕ್ಷೇತ್ರಗಳನ್ನು ಪುನರ್ ರಚಿಸಬೇಕಾದ ಅನಿವಾರ್ಯತೆ ಉಂಟಾಗಿದೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರಲಾಗಿದೆ.<br><br>i. ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ 2021, ದಿನಾಂಕ:18-9-2021ರ ಪ್ರಕರಣ 124, 163 ರಡಿಯಲ್ಲಿ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ಹಾಗೂ ಪ್ರಕರಣ 123, 162 ರಡಿಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಮೀಸಲಾತಿಯನ್ನು ನಿಗದಿಪಡಿಸುವ ಅಧಿಕಾರವನ್ನು ಹೊಂದಿರುತ್ತದೆ.<br><br>ii. ಈ ತಿದ್ದುಪಡಿಯ ಪ್ರಕಾರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದೆ. |

| | | |
|---|---|---|
| | | iii. ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ಸರ್ಕಾರವು ದಿನಾಂಕ:01-03-2023 ರಂದು ಅಧಿಸೂಚನೆ ಹೊರಡಿಸಿತ್ತು.<br><br>iv. ನಂತರ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿಸಂಖ್ಯೆ: 20426/2021ರ ಪ್ರಕರಣದಲ್ಲಿ ದಿನಾಂಕ:28-06-2023ರಂದು ನೀಡಿದ ನಿರ್ದೇಶನದಂತೆ ರಾಜ್ಯದ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ರೀಡೂ(Redo) ಮಾಡಲು ಸರ್ಕಾರವು ತೀರ್ಮಾನಿಸಿತು.<br><br>v. ನಂತರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ಹೊಸದಾಗಿ ರಚಿಸಲಾಯಿತು.<br><br>vi. ಆಯೋಗದ ಶಿಫಾರಸ್ಸಿನಂತೆ ಸರ್ಕಾರವು, ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ಅಧಿಸೂಚನೆ ಹೊರಡಿಸಿದೆ.<br><br>vii. ಪ್ರಸ್ತುತ ಸರ್ಕಾರವು ರಾಜ್ಯದ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ನಿಗದಿಪಡಿಸಲು ಬಾಕಿ ಇರುತ್ತದೆ. |
| (ಆ) | ರಾಜ್ಯದ ಎಷ್ಟು ಜಿಲ್ಲೆಗಳನ್ನು ತಾಲ್ಲೂಕು ಪಂಚಾಯತ್‌ಗಳಿಗೆ ಸ್ವಂತ ಕಟ್ಟಗಳಿರುವುದಿಲ್ಲ; (ವಿವರ ನೀಡುವುದು) | ಸ್ವಂತ ಕಟ್ಟಡಗಳಿಲ್ಲದ ತಾಲ್ಲೂಕು ಪಂಚಾಯತಿಗಳ ವಿವರವನ್ನು ಅನುಬಂಧದಲ್ಲಿ ನೀಡಿದೆ. |
| (ಇ) | ಜಿಲ್ಲಾ ಪಂಚಾಯತ್‌ಗಳಿಗೆ ಅನುದಾನವನ್ನು ಬಿಡುಗಡೆಮಾಡಿ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆಯೇ? (ವಿವರ ನೀಡುವುದು) | ಜಿಲ್ಲಾ ಪಂಚಾಯತಿಗಳಿಗೆ ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಅನಿರ್ಬಂಧಿತ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಮಾರ್ಗಸೂಚಿಯಂತೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಗ್ರಾಅಪ 207 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.